Shri K.A.Lokapur Arts.Sci & Comm. College
J.E.Society
ATHANI
591304
Dt.Belagavi

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 345 ಯುಆರ್‌ಸಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 14-6-2013

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು-560 001.

ಇವರಿಗೆ
ಕುಲಸಚಿವರು,
ರಾಣಿ ಚೆನ್ನಮ್ಮ ವಿಶ್ವವಿದ್ಯಾನಿಲಯ,
ಬೆಳಗಾವಿ.

ಮಾನ್ಯರೆ,

ವಿಷಯ:- 2013-14ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಕೆ.ಎ.ಲೋಕಾಪೂರ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಬೆಳಗಾವಿ ಈ ಮಹಾವಿದ್ಯಾಲಯಕ್ಕೆ ಹೊಸ ಸಂಯೋಜನೆ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ: ರಾಚವಿ/ಸಿಡಿಸಿ/ಬೆಳಗಾವಿ/2013-14/37, ದಿ: 30.03.2013.

---

2013-14ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಕೃಷ್ಣರಾವ ಅಣ್ಣಾರಾವ ಲೋಕಾಪೂರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ, ಬೆಳಗಾವಿ ಈ ಮಹಾವಿದ್ಯಾಲಯದಲ್ಲಿ ಎಂ.ಎ (ಇಂಗ್ಲೀಷ) ಕೋರ್ಸನ್ನು ಪ್ರಾರಂಭಿಸಲು ಹೊಸ ಸಂಯೋಜನೆ ಕೋರಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಕರ್ನಾಟಕ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಕುಲಪತಿಗಳ ಶಿಫಾರಸ್ಸು ನೀಡಿರುವ ಮಾನ್ಯತೆಯನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, 2013-14ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಕೃಷ್ಣರಾವ ಅಣ್ಣಾರಾವ ಲೋಕಾಪೂರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ, ಬೆಳಗಾವಿ ಈ ಮಹಾವಿದ್ಯಾಲಯದಲ್ಲಿ ಎಂ.ಎ (ಇಂಗ್ಲೀಷ) (ವಿಶ್ವವಿದ್ಯಾಲಯದ ಪಠ್ಯಕ್ರಮದಂತೆ ಎಲ್ಲ ಕಡ್ಡಾಯ ವಿಷಯಗಳು) ಕೋರ್ಸನ್ನು 20 ವಿದ್ಯಾರ್ಥಿ ಪ್ರಮಾಣದೊಂದಿಗೆ ಪ್ರಾರಂಭಿಸಲು ಹೊಸ ಸಂಯೋಜನೆಯನ್ನು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ

Direct CDC to process it
24/6/13

m.A.

Scanned with CamScanner

ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13) ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಪ್ರಕರಣ 59(3) ನಲ್ಲಿಯ ನಿಬಂಧನೆಗೊಳಪಟ್ಟಂತೆ ಹಾಗೂ ಸ್ಥಳೀಯ ವಿಚಾರಣಾ ಸಮಿತಿ ವರದಿಯ ಶಿಫಾರಸ್ಸಿನಲ್ಲಿ ಒಳಗೊಂಡಿರುವ ಷರತ್ತುಗಳನ್ನು ಕಡ್ಡಾಯವಾಗಿ ಈ ಶೈಕ್ಷಣಿಕ ಸಾಲಿನಲ್ಲಿಯೇ ಅನುಸರಿಸತಕ್ಕದ್ದು.

ತಮ್ಮ ನಂಬುಗೆಯ,

(ಪ್ರಕಾಶ್‌ರಾವ್ ಕೇಸರ್‌ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ).

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
3. ಪ್ರಾಂಶುಪಾಲರು, ಜಾಧವಜಿ ಶಿಕ್ಷಣ ಸಂಸ್ಥೆ, ಶ್ರೀ ಕೃಷ್ಣರಾವ ಅಣ್ಣಾರಾವ ಲೋಕಾಪೂರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ, ಪೋ:ಅಥಣಿ- 591 304, ತಾ:ಅಥಣಿ, ಬೆಳಗಾವಿ.

9972617671

**Co-Ordinator**
I. Q. A. C.
J.E.S's, Shri K. A. Lokapur,
Arts, Sci. & Comm. College,
Athani-591304. Dist: Belagavi.

**PRINCIPAL**
J. E. Society's Shri K. A. Lokapur
Arts, Science & Commerce College
ATHANI-591304. Dist: Belagavi.
College Code: 4204.

Scanned with CamScanner